ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

K.C ವ್ಯಾಲಿ ಯೋಜನೆ ಬಗ್ಗೆ

ಡಾ:ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

365(472) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೆ.ಸಿ ವ್ಯಾಲಿ ಯೋಜನೆ ಪ್ರಾರಂಭ ಆಗಿದ್ದು, ಯಾವಾಗ; ಈ ಯೋಜನೆಯ ರೂಪುರೇಷೆಗಳೇನು;

(ಆ) ಮೊದಲನೇ ಹಂತದ ಯೋಜನೆಗೆ ಬಿಡುಗಡೆಯಾದ ಅನುದಾನ ಎಷ್ಟು;

(ಇ) ಎರಡನೇ ಹಂತದ ಯೋಜನೆಯನ್ನು ರೂಪಿಸಲು ಸರ್ಕಾರ ಚಿಂತಿಸಿದೆಯೇ;

(ಈ) ಎರಡನೇ ಯೋಜನೆ ಮುಖಾಂತರ ಇನ್ನುಳಿದ ಕೆರೆಗಳಿಗೆ ನೀರನ್ನು ತುಂಬಿಸಲು ಸರ್ಕಾರ ಯೋಚಿಸಿದೆಯೇ;

(ಉ) ಈ ಯೋಜನೆಗಾಗಿ ಸರ್ಕಾರ ಮೀಸಲಿಟ್ಟ ಹಣ ಎಷ್ಟು; ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು ?